ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ,
ಶ್ರೀರಂಗಪಟ್ಟಣ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 42/2024

ಚಾ.ಸಾ. :-1
ಪ್ರಾ.ಸಾ. :-1

| | |
|---|---|
| ಹೆಸರು | : ಹೇಮಂತ್ ಕುಮಾರ್ |
| ತಂದೆಯ ಹೆಸರು | : ಶಿವಣ್ಣ |
| ವಯಸ್ಸು | : 44 ವರ್ಷ |
| ಉದ್ಯೋಗ | : ವ್ಯಾಪಾರ |
| ವಾಸಸ್ಥಳ | : ಟಿ.ಎಂ.ಹೊಸೂರು ಗ್ರಾಮ |

ಪ್ರಮಾಣೀಕರಿಸಲಾದ ದಿನಾಂಕಃ- 04.08.2026

ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :

ಮೃತ ಹರೀಶ್ ನನ್ನ ಸ್ನೇಹಿತನಾದ ಚಾ.ಸಾ-3 ರವರಿಗೆ ಪರಿಚಯ. ಚಾ.ಸಾ-2 ಪರಿಚಯವಿಲ್ಲ. ದಿನಾಂಕಃ 08.11.2023 ರಂದು ರಾತ್ರಿ 8.45 ಗಂಟೆ ಸಮಯದಲ್ಲಿ ನಾನು ಮತ್ತು ಚಾ.ಸಾ-3 ರವರು ದ್ವಿಚಕ್ರ ವಾಹನದಲ್ಲಿ ಟಿ.ಎಂ.ಹೊಸೂರಿಗೆ ಹೋಗುತ್ತಿದ್ದೆವು. ಬೆಂಗಳೂರು-ಮೈಸೂರು ಹಳೆಯ ಹೆದ್ದಾರಿಯಲ್ಲಿ ಸಾಯಿ ಗಾರ್ಮೆಂಟ್ಸ್ ಬಳಿ 2 ದ್ವಿಚಕ್ರ ವಾಹನಗಳು ಮುಖಾಮುಖಿಯಾಗಿ ಡಿಕ್ಕಿಯಾಗಿ ಅಪಘಾತವಾಗಿರುತ್ತದೆ. ನಾನು ಸುಮಾರು 100 ಮೀ. ದೂರದಿಂದ ಅಪಘಾತವನ್ನು ನೋಡಿರುತ್ತೇನೆ. ಆಕ್ಟಿವಾ ಹೋಂಡಾ ಚಾಲನೆ ಮಾಡುತ್ತಿದ್ದ ವ್ಯಕ್ತಿಗೆ ತೀವ್ರ ಗಾಯಗಳಾಗಿದ್ದವು, ಅವರನ್ನು ಜೀಪಿನ ಮೂಲಕ ಆಸ್ಪತ್ರೆಗೆ ಕಳುಹಿಸಿರುತ್ತೇವೆ. ಸ್ಪ್ಲೆಂಡರ್ ವಾಹನದಲ್ಲಿದ್ದವರಿಗೂ ಗಾಯಗಳಾಗಿದ್ದವು, ಅವರು ಆಸ್ಪತ್ರೆಗೆ ಹೋಗಿರುತ್ತಾರೆ. ಹತ್ತಿರ ಹೋಗಿ ನೋಡಿದಾಗ ಆಕ್ಟಿವಾ ಹೋಂಡಾ ಚಾಲನೆ ಮಾಡುತ್ತಿದ್ದವರು ಚಾ.ಸಾ-3 ರವರಿಗೆ

ಪರಿಚಯವಿರುವ ಹರೀಶ್ ಎಂದು ಗೊತ್ತಾಗಿರುತ್ತದೆ. ಅಪಘಾತಪಡಿಸಿದ ವಾಹನದ ಚಾಲಕನನ್ನು ಚಾ.ಸಾ-3 ರವರು ನಮ್ಮ ಊರಿನವರು ಎಂದು ಗುರುತಿಸಿರುತ್ತಾರೆ. ನಂತರ ಹರೀಶ್ ರವರು ಮೃತಪಟ್ಟಿರುತ್ತಾರೆ. ಬೇರೆ ಯಾರೂ ದೂರು ಕೊಡಲು ಬಂದಿರುವುದಿಲ್ಲ, ಹಾಗಾಗಿ ನಾನೇ ದೂರು ನೀಡಿರುತ್ತೇನೆ. ಸಾಕ್ಷಿಯ ಸಹಿ ಇರುವ ಒಂದು ದಾಖಲೆಯು ದೂರಾಗಿದ್ದು ಅದನ್ನು ಈಗ ನಿಪಿ-1 ಎಂದು ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರ್ತಿಸಲಾಯಿತು.

ಅಪಘಾತ ಸಮಯದಲ್ಲಿ ಆರೋಪಿಯು ಸುಮಾರು 50-60 ಕಿ.ಮೀ.ವೇಗದಲ್ಲಿ ವಾಹನ ಚಾಲನೆ ಮಾಡಿರುತ್ತಾರೆ. ಹರೀಶ್ ರವರು ಸುಮಾರು 30-40 ಕಿ.ಮೀ.ವೇಗದಲ್ಲಿ ವಾಹನ ಚಾಲನೆ ಮಾಡಿರುತ್ತಾರೆ.

ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು. ಸಾಕ್ಷಿಯ ಸಹಿ ಇರುವ ದಾಖಲೆಯು ಸ್ಥಳ ಮಹಜರ್ ಆಗಿದ್ದು, ಅದನ್ನು ಈಗ ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಮಹಜರ್ ಸಮಯದಲ್ಲಿ ನನ್ನ ಜೊತೆ ಬೇರೆ ಸಾಕ್ಷಿಗಳು ಸಹ ಹಾಜರಿದ್ದರು.  ಸದರಿ ಮಹಜರ್ ನಲ್ಲಿ ಪೊಲೀಸರು ಕೃತ್ಯ ಸ್ಥಳದ ಕಚ್ಚಾ ನಕಾಶೆಯನ್ನು ತಯಾರು ಮಾಡಿರುತ್ತಾರೆ. ರಸ್ತೆ ಅಪಘಾತಕ್ಕೆ ಸಂಬಂಧಿಸಿದಂತೆ ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ನಾನು ಅಪಘಾತ ಸ್ಥಳದ ಬಳಿ ಮಾಡಿರುತ್ತೇನೆ. ಮಹಜರ್ ಸಮಯದಲ್ಲಿ ಪೊಲೀಸರು ಫೋಟೋ ತೆಗೆದಿದ್ದು ಅದರಲ್ಲಿ ನನ್ನ ಮತ್ತು ಉಳಿದ ಸಾಕ್ಷಿದಾರರ ಭಾವಚಿತ್ರ ಇರುತ್ತದೆ. ಸದರಿ ಫೋಟೋವನ್ನು ಈಗ ನಿಪಿ-3 ಎಂದು ಗುರುತಿಸಲಾಯಿತು.

ಅದೇ ದಿನ ಪೊಲೀಸ್ ಠಾಣಾ ಆವರಣದಲ್ಲಿ ಅಪಘಾತಕ್ಕೆ ಸಂಬಂಧಿಸಿದಂತೆ 2 ವಾಹನಗಳನ್ನು ಪಂಚರ ಸಮಕ್ಷಮ ಮಹಜರ್ ಬರೆದು ಅಮಾನತ್ತುಪಡಿಸಿಕೊಂಡಿರುತ್ತಾರೆ. ಸದರಿ ಮಹಜರನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ಸದರಿ ದ್ವಿಚಕ್ರ ವಾಹನಗಳ 2 ಫೋಟೋಗಳನ್ನು ಈಗ ನೋಡುತ್ತಿದ್ದು ಅವುಗಳನ್ನು ಒಟ್ಟಾಗಿ ನಿಪಿ-5 ಎಂದು ಗುರುತಿಸಲಾಯಿತು.

ದಿನಾಂಕಃ 28.11.2023 ರಂದು ಪೊಲೀಸರು ನನ್ನನ್ನು ಠಾಣೆಗೆ ಕರೆಯಿಸಿ ವ್ಯಕ್ತಿಯೊಬ್ಬರನ್ನು ತೋರಿಸಿದ್ದು ನಾನು ಅವರೇ ವಾಹನ ಚಾಲನೆ ಮಾಡುತ್ತಿದ್ದರು ಎಂದು

ಗುರುತಿಸಿರುತ್ತೇನೆ. ಆರೋಪಿಯ ತಪ್ಪಿನಿಂದಲೇ ಅಪಘಾತವಾಗಿರುತ್ತದೆ. ಸಾಕ್ಷಿಯು ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :</u>

ಮೃತರು ನನಗೆ ಸಂಬಂಧಿಕರಲ್ಲ ಅಥವಾ ಸ್ನೇಹಿತರಲ್ಲ. ಅಪಘಾತದ ಬಗ್ಗೆ ಚಾ.ಸಾ-3 ರವರು ಹರೀಶ್ ರವರ ಮನೆಯವರಿಗೆ ತಿಳಿಸಿರುತ್ತಾರೆ. ಅಪಘಾತವಾದ ದಿವಸ ನಾನು ಪೊಲೀಸ್ ಠಾಣೆಗೆ ಮಾಹಿತಿ ನೀಡಿಲ್ಲ. ನಾನು ಅಪಘಾತವಾನ್ನು ನೇರವಾಗಿ ನೋಡಿಲ್ಲ ಎಂದರೆ ಸುಳ್ಳು. ಅಪಘಾತವನ್ನು ನಾನು ನೇರವಾಗಿ ನೋಡಿದ್ದರೆ ಅದೇ ದಿನ ದೂರು ನೀಡುತ್ತಿದ್ದೆ ಎಂದರೆ ಸುಳ್ಳು. ದೂರನ್ನು ನನ್ನ ಹೇಳಿಕೆಯ ಆಧಾರದ ಮೇಲೆ ಪೊಲೀಸರು ತಯಾರು ಮಾಡಿರುತ್ತಾರೆ. ಪೊಲೀಸರು ತಯಾರು ಮಾಡಿದ ದೂರಿಗೆ ನಾನು ಸಹಿ ಮಾಡಿರುತ್ತೇನೆ ಎಂದರೆ ಸುಳ್ಳು. ಮೃತರು ಅತಿವೇಗವಾಗಿ ವಾಹನ ಚಾಲನೆ ಮಾಡಿದ್ದರಿಂದ ಅಪಘಾತವಾಗಿರುತ್ತದೆ ಎಂದರೆ ಸುಳ್ಳು. ಆರೋಪಿ ನಿರ್ಲಕ್ಷ್ಯತನದಿಂದ ಅಪಘಾತ ಆಗದಿದ್ದರೂ ವಿಮೆ ಪರಿಹಾರದ ಸಲುವಾಗಿ ಸುಳ್ಳು ದೂರು ನೀಡಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ನಾನು ಸಹಿಯನ್ನು ಪೊಲೀಸ್ ಠಾಣೆಯ ಬಳಿ ಮಾಡಿರುತ್ತೇನೆ ಎಂದರೆ ಸುಳ್ಳು. ಮಹಜರನ್ನು ಮಧ್ಯಾಹ್ನ ಸುಮಾರು 3.00 ಗಂಟೆಗೆ ಬರೆದಿರುತ್ತಾರೆ. ಮಹಜರನ್ನು ಯಾರು ಬರೆದಿರುತ್ತಾರೆಂದು ಗೊತ್ತಿಲ್ಲ. ವಾಹನಗಳನ್ನು ಸ್ಥಳದಲ್ಲಿ ಅಮಾನತ್ತುಪಡಿಸಿಕೊಂಡಿಲ್ಲ ಎಂದರೆ ಗೊತ್ತಿಲ್ಲ. ನಾನು ಸ್ಥಳ ಮಹಜರ್ ಸಮಯದಲ್ಲಿ ಹಾಜರಿದ್ದರೆ ಸ್ಥಳದಲ್ಲಿಯೇ ವಾಹನಗಳನ್ನು ಅಮಾನತ್ತುಪಡಿಸಿಕೊಳ್ಳುತ್ತಿದ್ದರು ಎಂದರೆ ಸರಿಯಲ್ಲ. ಮಹಜರ್ ಸಮಯದಲ್ಲಿ 2-3 ಪೊಲೀಸ್ ಸಿಬ್ಬಂದಿಗಳು ಬಂದಿದ್ದರು.

ಅಪಘಾತವನ್ನು ನಾನು ನೇರವಾಗಿ ನೋಡಿರುವುದಿಲ್ಲ ಎಂದರೆ ಸರಿಯಲ್ಲ. ಮೃತರ ಕುಟುಂಬದವರು ನನಗೆ ಪರಿಚಯವಿರುವ ಕಾರಣ ಅವರಿಗೆ ವಿಮೆ ಪರಿಹಾರ ಕೊಡಿಸಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆ :</u> ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

ಪ್ರಧಾನ ಹಿರಿಯ ಸಿಜೆ ಮತ್ತು
ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.

ಸಾಕ್ಷಿದಾರರ ಸಹಿ.